ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಸೋಮವಾರ, ದಿನಾಂಕ : 28 ನೇ ಸೆಪ್ಟೆಂಬರ್, 2020

ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆ ಭರ್ತಿ ಬಗ್ಗೆ

ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) :-

795 (972) ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಸರ್ಕಾರಿ ಹಿರಿಯ ಪ್ರಾಥಮಿಕ, ಪ್ರೌಢ ಹಾಗೂ ಪದವಿ ಪೂರ್ವ ಕಾಲೇಜುಗಳಲ್ಲಿ ಖಾಲಿ ಇರುವ ದೈಹಿಕ ಶಿಕ್ಷಣ ಶಿಕ್ಷಕರ ಹುದ್ದೆಗಳ ಸಂಖ್ಯೆ ಎಷ್ಟು ; (ಪ್ರತ್ಯೇಕವಾಗಿ ವಿವರ ನೀಡುವುದು)

(ಆ) ಎಷ್ಟು ಸಮಯದಿಂದ ಖಾಲಿ ಹುದ್ದೆಗಳನ್ನು ಭರ್ತಿ ಮಾಡಿರುವುದಿಲ್ಲ;

(ಇ) ದೈಹಿಕ ಶಿಕ್ಷಕರ ನೇಮಕಾತಿ ಮಾಡುವಲ್ಲಿ ಸರ್ಕಾರ ವಿಳಂಬ ಮಾಡುತ್ತಿರುವುದಕ್ಕೆ ಕಾರಣಗಳೇನು :

(ಈ) ಸದರಿ ಹುದ್ದೆಗಳನ್ನು ಯಾವ ಕಾಲಮಿತಿಯಲ್ಲಿ ಭರ್ತಿ ಮಾಡಲು ಸರ್ಕಾರ ಕ್ರಮ ಕೈಗೊಳ್ಳುವುದು ?